# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 35 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 18-12-2018 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನ ಎಂ.ಜಿ.ಎಂ. ಆಸ್ಪತ್ರೆಯಲ್ಲಿ ತಜ್ಞ ವೈದ್ಯರು ಮತ್ತು ಮಕ್ಕಳ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಖಾಲಿ ಇರುವ ತಜ್ಞರ ವೈದ್ಯರುಗಳ ಸಂಖ್ಯೆ ಎಷ್ಟು: | ಬಂದಿದೆ.<br>ಮೂಡಿಗೆರೆ ಎಂ.ಜಿ.ಎಂ ಆಸ್ಪತ್ರೆಯಲ್ಲಿ ಮಂಜೂರಾದ ತಜ್ಞರ/ ವೈದ್ಯರು ಒಟ್ಟು ಸಂಖ್ಯೆ: 16, ಖಾಲಿ ಹುದ್ದೆ ಸಂಖ್ಯೆ:06<br>(ತಜ್ಞರು \| ಮಂಜೂರು \| ಕಾರ್ಯನಿರತ \| ಖಾಲಿ)<br>(ತಜ್ಞ ವೈದ್ಯರು \| 16 \| 10 \| 6 (CMO, GM, PAED, Radio, SMO-2)) |
| ಆ) | ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು: | ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧದಲ್ಲಿ ನೀಡಲಾಗಿದೆ. |
| ಇ) | ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು? (ವಿವರಣೆ ನೀಡುವುದು) | |

Nested table in answer (ಅ):

| ತಜ್ಞರು | ಮಂಜೂರು | ಕಾರ್ಯನಿರತ | ಖಾಲಿ |
|---|---|---|---|
| ತಜ್ಞ ವೈದ್ಯರು | 16 | 10 | 6 (CMO, GM, PAED, Radio, SMO-2) |

ಸಂಖ್ಯೆ: ಆಕುಕ 67 ಹೆಚ್‌ಎಸ್‌ಡಿ 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

# ಪ್ರಶ್ನೆ ಸಂಖ್ಯೆ: 35ಕ್ಕೆ ಅನುಬಂಧ

## ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕೆಪಿಎಸ್‌ಸಿ ಮೂಲಕ ಆಯ್ಕೆಗೊಂಡು 255 ತಜ್ಞ ವೈದ್ಯರು ಸ್ಥಳ ಆಯ್ಕೆಮಾಡಿಕೊಂಡಿದ್ದು 156 ತಜ್ಞ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ.

255 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು, ಸ್ಥಳ ಆಯ್ಕೆಮಾಡಿಕೊಂಡಿದ್ದು 230 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ. ಹಾಗೂ ದಿ:04.12.2018 ರಂದು ಕೆಪಿಎಸ್‌ಸಿ ಮುಖಾಂತರ ಆಯ್ಕೆಯಾಗಿ ಸಮಾಲೋಚನೆಯಲ್ಲಿ ಸ್ಥಳ ಆಯ್ಕೆಮಾಡಿಕೊಳ್ಳದ 22 ಹೈದ್ರಾಬಾದ್-ಕರ್ನಾಟಕದ ರಾಜ್ಯ ವೃಂದದಲ್ಲಿ 180 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗಿರುತ್ತದೆ. ಹಾಗೂ 127 ತಜ್ಞ ವೈದ್ಯರುಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗಿರುತ್ತದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಮತ್ತು ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸರ್ಕಾರಿ ಆದೇಶ ಸಂಖ್ಯೆ: ಆಕುಕ 297 ಹೆಚ್‌ಎಸ್‌ಹೆಚ್ 2015, ದಿನಾಂಕ:22-04-2016 ಮತ್ತು ಸೇರ್ಪಡೆ ದಿ:07.10.2016 ಹಾಗೂ ಆಕುಕ 359 ಹೆಚ್‌ಎಸ್‌ಹೆಚ್ 2016, ದಿನಾಂಕ:01-08-2016 (ಎಂಬಿಬಿಎಸ್ ವೈದ್ಯಾಧಿಕಾರಿಗಳ ಹುದ್ದೆಗೆ ಎದುರು ಆಯುಷ್ ವೈದ್ಯರ ನೇಮಕಾತಿ)

ತಜ್ಞ ವೈದ್ಯರನ್ನು "On Call Basis" ಮೇಲೆ ತೆಗೆದುಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 178 ಹೆಚ್‌ಎಸ್‌ಹೆಚ್ 2011 ದಿನಾಂಕ: 20-05-2016.

ಸರ್ಕಾರದ ಆದೇಶ ಸಂಖ್ಯೆ: ಆಕುಕ 554 ಹೆಚ್‌ಎಸ್‌ಹೆಚ್ 2016, ದಿನಾಂಕ: 22-11-2016 ರಲ್ಲಿ ಸೂಚಿತವಾದಂತೆ ತಜ್ಞ ವೈದ್ಯರುಗಳ ಎದುರು ಹುದ್ದೆಯಲ್ಲಿ ಎಂಬಿಬಿಎಸ್ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಆಯುಕ್ತರು, ಆರೋಗ್ಯ ಮತ್ತು ಕು.ಕ ಸೇವೆಗಳು, ಬೆಂಗಳೂರು ಸುತ್ತೋಲೆ ಸಂಖ್ಯೆ: ಜೇಆರ್‌ಓ(1ಎ)/101/2012-13, ದಿನಾಂಕ: 09-12-2016 ರಂತೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು/ ಜಿಲ್ಲಾ ಆಕುಕ ಅಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.

ವೈದ್ಯರ ಪದವಿಯನ್ನು ಸರ್ಕಾರಿ ಕೋಟಾದಲ್ಲಿ ಪೂರ್ಣಗೊಳಿಸಿದ ವೈದ್ಯರುಗಳನ್ನು 1 ವರ್ಷ ಕಡ್ಡಾಯ ಗ್ರಾಮೀಣ ಸೇವೆಯಡಿಯಲ್ಲಿ ವೈದ್ಯರುಗಳನ್ನು ಖಾಲಿ ಹುದ್ದೆಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುತ್ತಿದೆ.

ವೈದ್ಯರ ನೇಮಕಾತಿ ಸಮಾಲೋಚನೆ ನಂತರ ಹೆಚ್ಚಿನ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಖಾಲಿ ಇರುವ ತಜ್ಞರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲು ಕೋರಿ ದಿನಾಂಕ.3.11.2018 ರಲ್ಲಿ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ.

ವೈದ್ಯರ ನೇಮಕಾತಿ ಸಮಾಲೋಚನೆ ನಂತರ ಹೆಚ್ಚಿನ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇರುವುದರಿಂದ ಕೆಪಿಎಸ್‌ಸಿ ಯಿಂದ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹೆಚ್ಚುವರಿ ಪಟ್ಟಿಯನ್ನು ಕಳುಹಿಸಿಕೊಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ದಿ:01.12.2018 ರಂದು ಪತ್ರ ಬರೆಯಲಾಗಿದೆ.

ಕರ್ನಾಟಕ ಲೋಕಸೇವಾ ಆಯೋಗದಿಂದ ಹೆಚ್ಚುವರಿ ಪಟ್ಟಿಯನ್ನು ನೀಡಿದನಂತರ ನಿಯಮಾನುಸಾರ ವೈದ್ಯರುಗಳಿಗೆ ನೇಮಕಾತಿ ಆದೇಶವನ್ನು ನೀಡಲು ಕ್ರಮವಹಿಸಲಾಗುತ್ತದೆ.